ಅ) *ಬೆಂಗಳೂರಿನ ವಸಂತನಗರದಲ್ಲಿರುವ ಪೋಲೀಸ್ ಕ್ವಾರ್ಟರ್ಸ್‌ಗಳ ಸಂಖ್ಯೆ ಎಷ್ಟು?*

ಆ) *ಈ ಕ್ವಾರ್ಟರ್ಸ್‌ಗಳಲ್ಲಿ ಹಲವಾರು ಮೂಲಭೂತ ಸೌಕರ್ಯದ ಸಮಸ್ಯೆಗಳಿರುವುದರಿಂದ ಕೂಡಲೇ ದುರಸ್ತಿ ಮತ್ತು ಇತ್ಯಾದಿ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?*

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಒಟ್ಟು 42.

ಆ) ಈ ವಸತಿಗೃಹಗಳಿಗೆ ಅಗತ್ಯಕ್ಕೆ ತಕ್ಕಂತೆ ಅನುದಾನ ಲಭ್ಯತೆಯನ್ನಾಧರಿಸಿ ದುರಸ್ತಿಗಳನ್ನು ಮಾಡಲಾಗುತ್ತಿದೆ. ಇನ್ನೂ ಹಲವಾರು ಅಭಿವೃದ್ಧಿ ಕಾಮಗಾರಿಗಳಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಲಾಗುತ್ತಿದ್ದು, ಆದ್ಯತೆಯ ಮೇರೆಗೆ ದುರಸ್ತಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಗತ್ಯವಿರುವ ಅನುದಾನಕ್ಕಾಗಿ ಪೋಲೀಸ್ ಇಲಾಖೆಯನ್ನು ಕೋರಲಾಗುವುದು.

ಯುವಜನ ಸೇವಾ ಇಲಾಖೆಯ ಕಾರ್ಯಕ್ರಮ ಅನುಷ್ಠಾನ

4965 - ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?*

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :

ಅ) ಹೌದು.

ಆ) ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳ ಹುದ್ದೆಗಳನ್ನು ಸೃಜಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ತುರುವೇಕೆರೆ ತಾಲ್ಲೂಕಿನ ಸಂಪರ್ಕ ರಸ್ತೆಗಳು ಹಾಗೂ ಸೇತುವೆಗಳು ಹಾಳಾಗಿರುವುದು

4967 - ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ತುರುವೇಕೆರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುರುವೇಕೆರೆ ತಾಲ್ಲೂಕಿನಲ್ಲಿ ಈ ಬಾರಿ ಅತೀ ಹೆಚ್ಚು ಮಳೆ ಬಿದ್ದು ಸುಮಾರು 110 ಕಿ.ಮೀ. ಸಂಪರ್ಕ ರಸ್ತೆಗಳು ಹಾಗೂ 23 ಸೇತುವೆಗಳು ಸಂಪೂರ್ಣ ಹಾನಿಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*